National
Kannada
11.09.2025: 19.35 hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<u>ಮುಖ್ಯಾಂಶಗಳು :</u>

೧. ವಿಜ್ಞಾನ-ತಂತ್ರಜ್ಞಾನ ಸೇರಿದಂತೆ ವಿವಿಧ ವಲಯಗಳಲ್ಲಿ ನಾಲ್ಕು ಒಪ್ಪಂದಗಳಿಗೆ ಭಾರತ-ಮಾರಿಷಸ್ ಸಹಿ

೨. ಕಾಮನ್‌ವೆಲ್ತ್ ಸಂಸದೀಯ ಸಂಘದ ೧೧ನೇ ಸಮ್ಮೇಳನಕ್ಕೆ ಲೋಕಸಭಾಧ್ಯಕ್ಷ ಸ್ಪೀಕರ್ ಓಂ ಬಿರ್ಲಾ ಚಾಲನೆ

೩. ದೇಶದ ಎಲೆಕ್ಟ್ರಾನಿಕ್ಸ್ ಉತ್ಪಾದನಾ ಕ್ಷೇತ್ರದಲ್ಲಿ ೨೫ ಲಕ್ಷ ಉದ್ಯೋಗಗಳ ಸೃಜನೆ- ಕೇಂದ್ರ ಸಚಿವ ಅಶ್ವಿನಿ ವೈಷ್ಣವ್

೪. ಏಷ್ಯಾಕಪ್ ಟಿ-೨೦ ಕ್ರಿಕೆಟ್: 'ಬಿ' ಗುಂಪಿನ ಪಂದ್ಯದಲ್ಲಿಂದು ಬಾಂಗ್ಲಾದೇಶ-ಹಾಂಕಾಂಗ್ ಮುಖಾಮುಖಿ

*><><><*><><><*

ಪ್ರಧಾನಿ ನರೇಂದ್ರ ಮೋದಿ ಇಂದು ವಾರಣಾಸಿಯಲ್ಲಿ ಮಾರಿಷಸ್ ಪ್ರಧಾನಿ ನವೀನ್‌ಚಂದ್ರ ರಾಮಗೂಲಂ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಜಂಟಿ ಪತ್ರಿಕಾಗೋಷ್ಠಿಯಲ್ಲಿ ಪ್ರಧಾನಿ ಮೋದಿ, ಭಾರತ ಮತ್ತು ಮಾರಿಷಸ್ ಎರಡು ರಾಷ್ಟ್ರಗಳು, ಆದರೆ ಕನಸುಗಳು ಒಂದೇ. ಭಾರತ ಮತ್ತು ಮಾರಿಷಸ್ ಕೇವಲ ಪಾಲುದಾರರಲ್ಲ, ಬದಲಾಗಿ ಒಂದು ಕುಟುಂಬ ಎಂದು ಹೇಳಿದರು. ವಿದೇಶದಲ್ಲಿ ಮೊದಲ ಜನೌಷಧ ಕೇಂದ್ರವನ್ನು ಈಗ ಮಾರಿಷಸ್‌ನಲ್ಲಿ ಸ್ಥಾಪಿಸಲಾಗಿದೆ. ಇಂಧನ ಭದ್ರತೆಯು ದ್ವಿಪಕ್ಷೀಯ ಪಾಲುದಾರಿಕೆಯ ಪ್ರಮುಖ ಆಧಾರಸ್ತಂಭವಾಗಿದೆ. ಐಐಟಿ ಮದ್ರಾಸ್ ಮತ್ತು ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಪ್ಲಾಂಟೇಶನ್ ಮ್ಯಾನೇಜ್‌ಮೆಂಟ್, ಮಾರಿಷಸ್ ವಿಶ್ವವಿದ್ಯಾಲಯದೊಂದಿಗೆ ಒಪ್ಪಂದಗಳಿಗೆ ಸಹಿ ಹಾಕಿವೆ ಎಂದು ಪ್ರಧಾನಿ ಮೋದಿ ತಿಳಿಸಿದರು.

ಧ್ವನಿ : ಪ್ರಧಾನಿ ಮೋದಿ ( ೪೦ ಸೆಕೆಂಡುಗಳು)

ವಿಜ್ಞಾನ ಮತ್ತು ತಂತ್ರಜ್ಞಾನ, ಸಾಗರಶಾಸ್ತ್ರ, ಆಡಳಿತ ತರಬೇತಿ ಮತ್ತು ಟೆಲಿಮೆಟ್ರಿ ಕ್ಷೇತ್ರದಲ್ಲಿ ನಾಲ್ಕು ಒಪ್ಪಂದಗಳನ್ನು ಇದೇ ವೇಳೆ ವಿನಿಮಯ ಮಾಡಿಕೊಳ್ಳಲಾಯಿತು. ಅಲ್ಲದೇ ವಿದ್ಯುತ್ ವಲಯಕ್ಕೆ ಸಂಬಂಧಿಸಿದಂತೆ ಮೂರು ದಾಖಲೆಗಳು, ಸಣ್ಣ ಅಭಿವೃದ್ಧಿ ಯೋಜನೆಗಳಿಗೆ ಭಾರತದಿಂದ ಅನುದಾನ ಮತ್ತು ಹೈಡ್ರೋಗ್ರಫಿಯನ್ನು ಸಹ ವಿನಿಮಯ ಮಾಡಿಕೊಳ್ಳಲಾಯಿತು.

*><><><*><><><*

ಭಾರತ ಮತ್ತು ಮಾರಿಷಸ್, ಕಡಲ ಭದ್ರತೆ, ಕಡಲ್ಗಳ್ಳತನ ಮತ್ತು ಮಾದಕವಸ್ತು ಕಳ್ಳಸಾಗಣೆ ಸಂಬಂಧಿಸಿದ ಸವಾಲುಗಳನ್ನು ಎದುರಿಸಲು ಒಟ್ಟಾಗಿ ಕೆಲಸ ಮಾಡುತ್ತಿವೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಹೇಳಿದ್ದಾರೆ. ಮಾಧ್ಯಮಗಳಿಗೆ ಮಾಹಿತಿ ನೀಡಿದ ಅವರು, ಮಾರಿಷಸ್, ಭಾರತದ ನೆರೆಹೊರೆ ಮೊದಲ ನೀತಿ ಮತ್ತು ವಿಷನ್ ಮಹಾಸಾಗರದ ಅವಿಭಾಜ್ಯ ಅಂಗವಾಗಿದೆ. ಭಾರತ-ಮಾರಿಷಸ್ ದ್ವಿಪಕ್ಷೀಯ ಸಂಬಂಧವು ಸಾಂಸ್ಕೃತಿಕ, ನಾಗರಿಕ ಮತ್ತು ಸಮುದಾಯ ಬಂಧಗಳಲ್ಲಿ ಬೇರೂರಿರುವ ವಿಶಿಷ್ಟ ಸಂಬಂಧವಾಗಿದೆ ಎಂದರು. ಅಭಿವೃದ್ಧಿ, ಸಹಕಾರ, ಕಡಲ ಭದ್ರತೆ ಮತ್ತು ಆರೋಗ್ಯ ಅಭಿವೃದ್ಧಿ ಸೇರಿದಂತೆ ವೈವಿಧ್ಯಮಯ ಕ್ಷೇತ್ರಗಳಲ್ಲಿ ಭಾರತ-ಮಾರಿಷಸ್ ಪಾಲುದಾರಿಕೆ ಹೊಂದಿವೆ ಎಂದು ವಿಕ್ರಮ್ ಮಿಸ್ರಿ ತಿಳಿಸಿದರು.

*><><><*><><><*

ಬೆಂಗಳೂರಿನಲ್ಲಿ ಇಂದಿನಿಂದ ಮೂರು ದಿನಗಳ ಕಾಲ ನಡೆಯಲಿರುವ ಕಾಮನ್‌ವೆಲ್ತ್ ಸಂಸದೀಯ ಸಂಘದ ೧೧ನೇ ಸಮ್ಮೇಳನಕ್ಕೆ ಲೋಕಸಭಾಧ್ಯಕ್ಷ ಓಂ ಬಿರ್ಲಾ ಚಾಲನೆ ನೀಡಿದರು. ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ನಾವು ಶಾಸಕಾಂಗ ಪ್ರತಿನಿಧಿಗಳಾಗಿ ಮಾತ್ರವಲ್ಲದೆ, ಪ್ರಜಾಪ್ರಭುತ್ವದ ರಕ್ಷಕರಾಗಿಯೂ ಇಲ್ಲಿ ಸೇರಿದ್ದೇವೆ. ಡಾ. ಬಿ.ಆರ್.ಅಂಬೇಡ್ಕರ್ ಅವರ ಮಾತಿನಂತೆ, ಪ್ರಜಾಪ್ರಭುತ್ವವು ಭಾರತಕ್ಕೆ ಹೊಸದಾಗಿ ಆಮದು ಮಾಡಿಕೊಂಡ ಉಡುಗೊರೆಯಲ್ಲ. ಬದಲಾಗಿ ನಮ್ಮ ನಾಗರಿಕತೆಯ ನೀತಿಯಲ್ಲಿ ಆಳವಾಗಿ ಬೇರೂರಿರುವ ತತ್ವವಾಗಿದೆ ಎಂದು ಹೇಳಿದರು. ಲೋಕಸಭಾಧ್ಯಕ್ಷ ಓಂ ಬಿರ್ಲಾ ಮಾತನಾಡಿ, ಲೋಕತಂತ್ರದ ಪ್ರತಿಯೊಂದು ಅಂಗವು ಪಾರದರ್ಶಕವಾಗಿರಬೇಕು. ವಿಭಿನ್ನ ಚರ್ಚೆಯ ನಂತರ ಸಂವಿಧಾನ ರೂಪುಗೊಂಡಿತು. ಭಾರತ ಜಗತ್ತಿನ ಅತಿ ದೊಡ್ಡ ಪ್ರಜಾಪ್ರಭುತ್ವ ದೇಶವಾಗಿದೆ. ಪ್ರಜಾತಂತ್ರ ಈಗಲೂ ಜೀವಂತವಾಗಿದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್, ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

*><><><*><><><*

ಗುಜರಾತ್ ರಾಜ್ಯಪಾಲ ಆಚಾರ್ಯ ದೇವವ್ರತ್ ಅವರಿಗೆ ಮಹಾರಾಷ್ಟ್ರದ ಹೆಚ್ಚುವರಿ ಹೊಣೆ ನೀಡಲಾಗಿದೆ. ಭಾರತದ ಉಪರಾಷ್ಟ್ರಪತಿಯಾಗಿ ಆಯ್ಕೆಯಾದ ನಂತರ ಸಿ.ಪಿ. ರಾಧಾಕೃಷ್ಣನ್ ಅವರು ಮಹಾರಾಷ್ಟ್ರ ರಾಜ್ಯಪಾಲರ ಸ್ಥಾನಕ್ಕೆ ರಾಜೀನಾಮೆ ನೀಡಿದ ನಂತರ ಆಚಾರ್ಯ ದೇವವ್ರತ್ ಅವರಿಗೆ ಈ ಹೊಣೆಗಾರಿಕೆ ನೀಡಲಾಗಿದೆ ಎಂದು ರಾಷ್ಟ್ರಪತಿ ಭವನ ಪ್ರಕಟಣೆ ತಿಳಿಸಿದೆ.

*><><><*><><><*

ಪ್ರಧಾನಿ ನರೇಂದ್ರ ಮೋದಿಯವರ ಸ್ವಾವಲಂಬನೆ ಮತ್ತು 'ಮೇಕ್ ಇನ್ ಇಂಡಿಯಾ' ದೃಷ್ಟಿಕೋನದಡಿಯಲ್ಲಿ ದೇಶವು ಮಾಹಿತಿ ತಂತ್ರಜ್ಞಾನ ಮತ್ತು ಎಲೆಕ್ಟ್ರಾನಿಕ್ ಉತ್ಪಾದನೆಯ ಕೇಂದ್ರವಾಗಿ ವೇಗವಾಗಿ ಹೊರಹೊಮ್ಮುತ್ತಿದೆ ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಜೈಪುರದಲ್ಲಿ ಇಂದು ಲಘು ಉದ್ಯೋಗ ಭಾರತಿ ಆಯೋಜಿಸಿದ್ದ 'ಐಡಿಯಾಥಾನ್ ೨೦೨೫' ರ ಸಮಾರೋಪ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಸಚಿವರು, ದೇಶದಲ್ಲಿ ಎಲೆಕ್ಟ್ರಾನಿಕ್ ಉತ್ಪಾದನೆಯು ೧೧.೫ ಲಕ್ಷ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಉದ್ಯಮವಾಗಿ ಬೆಳೆದಿದ್ದು, ೨೫ ಲಕ್ಷಕ್ಕೂ ಹೆಚ್ಚು ಜನರಿಗೆ ಉದ್ಯೋಗಾವಕಾಶವನ್ನು ಸೃಷ್ಟಿಸಿದೆ ಎಂದು ಮಾಹಿತಿ ನೀಡಿದರು. ಭಾರತದ ಎಲೆಕ್ಟ್ರಾನಿಕ್ ಉತ್ಪಾದನೆಯು ದೇಶೀಯ ಅವಶ್ಯಕತೆಗಳನ್ನು ಪೂರೈಸುವುದಲ್ಲದೆ, ರಫ್ತು ಮೂಲಕ ಅಂತಾರಾಷ್ಟ್ರೀಯ ಮಾರುಕಟ್ಟೆಗಳನ್ನು ಪ್ರವೇಶಿಸುತ್ತದೆ ಎಂದರು.

*><><><*><><><*

ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ದೇಶವು ಸಾಂಸ್ಕೃತಿಕ ಪುನರುಜ್ಜೀವನದ ಹಂತದಲ್ಲಿ ಸಾಗುತ್ತಿದೆ ಎಂದು ಕೇಂದ್ರ ಸಂಸ್ಕೃತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ಜ್ಞಾನ ಭಾರತಂ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು, 'ಜ್ಞಾನ ಭಾರತಂ' ಭಾರತದ ಹಸ್ತಪ್ರತಿ ಪರಂಪರೆಯನ್ನು ಸಂರಕ್ಷಿಸುವುದು, ಡಿಜಿಟಲೀಕರಣಗೊಳಿಸುವುದು ಮತ್ತು ಪ್ರಸಾರ ಮಾಡಲು ಮೀಸಲಾಗಿರುವ ರಾಷ್ಟ್ರೀಯ ಉಪಕ್ರಮವಾಗಿದೆ ಎಂದು ತಿಳಿಸಿದರು. 'ಜ್ಞಾನ ಭಾರತಂ' ಮಿಷನ್ ಭಾರತದ ಹಸ್ತಪ್ರತಿ ಪರಂಪರೆಯನ್ನು ಮುಂದಿನ ಪೀಳಿಗೆಗೆ ಸಂರಕ್ಷಿಸುವ ಗುರಿಯನ್ನು ಹೊಂದಿದೆ. ಈ ಮಿಷನ್ ಅಡಿಯಲ್ಲಿ, ೨೫ ಕ್ಲಸ್ಟರ್‌ಗಳು, ೨೦ ಪ್ರಾದೇಶಿಕ ಕೇಂದ್ರಗಳು ಮತ್ತು ಹತ್ತು ಶ್ರೇಷ್ಠತಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು.

*><><><*><><><*

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಲಕ್ನೋ, ತಿರುವನಂತಪುರಂ, ತಿರುಚ್ಚಿ, ಕಲ್ಲಿಕೋಟೆ ಮತ್ತು ಅಮೃತಸರ ವಿಮಾನ ನಿಲ್ದಾಣಗಳಲ್ಲಿ ಫಾಸ್ಟ್ ಟ್ರ್ಯಾಕ್ ವಲಸೆ-ವಿಶ್ವಾಸಾರ್ಹ ಪ್ರಯಾಣಿಕರ ಕಾರ್ಯಕ್ರಮವನ್ನು ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಉದ್ಘಾಟಿಸಿದರು. ಈ ಕಾರ್ಯಕ್ರಮವು ವೇಗವಾದ, ಸುಗಮ ಮತ್ತು ಸುರಕ್ಷಿತ ವಲಸೆ ಅನುಮತಿಯೊಂದಿಗೆ ಅಂತಾರಾಷ್ಟ್ರೀಯ ಚಲನಶೀಲತೆಯನ್ನು ಸುಗಮಗೊಳಿಸುವ ಗುರಿಯನ್ನು ಹೊಂದಿದೆ. ಇದು ಇತರೆ ದೇಶಗಳಿಂದ ಬರುವ ಭಾರತೀಯ ಪ್ರಜೆಗಳು ಮತ್ತು ಭಾರತದ ಸಾಗರೋತ್ತರ ನಾಗರಿಕರಿಗೆ ಹೆಚ್ಚಿನ ಸೌಲಭ್ಯಗಳನ್ನು ಒದಗಿಸುತ್ತದೆ. ಇದು ವಲಸೆ ಅನುಮತಿ ಪ್ರಕ್ರಿಯೆಯಲ್ಲಿ ಮಾನವ ಹಸ್ತಕ್ಷೇಪವನ್ನು ಕಡಿಮೆ ಮಾಡುತ್ತದೆ. ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಅಮಿತ್ ಶಾ, ಫಾಸ್ಟ್ ಟ್ರ್ಯಾಕ್ ವಲಸೆ ಕಾರ್ಯಕ್ರಮವು ವಿಶ್ವಾಸಾರ್ಹ ಪ್ರಯಾಣಿಕರ ಕಾರ್ಯಕ್ರಮವಾಗಿದ್ದು, ಇದು ವಲಸೆಯನ್ನು ಸರಳ, ವೇಗ ಮತ್ತು ಸಮಸ್ಯೆರಹಿತವಾಗಿಸುತ್ತದೆ ಎಂದು ಹೇಳಿದರು. ಕಳೆದ ವರ್ಷ ದೆಹಲಿಯಲ್ಲಿ ಈ ಕಾರ್ಯಕ್ರಮವನ್ನು ಆರಂಭಿಸಲಾಯಿತು ಮತ್ತು ಇಲ್ಲಿಯವರೆಗೆ ದೇಶಾದ್ಯಂತ ೧೩ ವಿಮಾನ ನಿಲ್ದಾಣಗಳಲ್ಲಿ ಈ ಸೌಲಭ್ಯವನ್ನು ಪ್ರಾರಂಭಿಸಲಾಗಿದೆ. ಇಲ್ಲಿಯವರೆಗೆ, ಮೂರು ಲಕ್ಷ ಪ್ರಯಾಣಿಕರು ಈ ಪೋರ್ಟಲ್‌ನಲ್ಲಿ ನೋಂದಾಯಿಸಿಕೊಂಡಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

*><><><*><><><*

ನೇಪಾಳದ ಪ್ರಸ್ತುತ ಸವಾಲುಗಳನ್ನು ಸಾಂವಿಧಾನಿಕ ಮಿತಿಯೊಳಗೆ ಪರಿಹರಿಸಲು ಮತ್ತು ಸಮಾಲೋಚನೆಯಲ್ಲಿ ತೊಡಗಿರುವ ಎಲ್ಲಾ ಪ್ರಯತ್ನಗಳನ್ನು ಮಾಡುತ್ತಿದ್ದೇವೆ ಎಂದು ನೇಪಾಳ ರಾಷ್ಟ್ರಪತಿ ರಾಮಚಂದ್ರ ಪೌಡೆಲ್ ತಿಳಿಸಿದ್ದಾರೆ. ನೇಪಾಳದ ಮುಖ್ಯಸ್ಥರು ಪ್ರಸ್ತುತ ಬಿಕ್ಕಟ್ಟಿಗೆ ಸಾಂವಿಧಾನಿಕ ಪರಿಹಾರಗಳನ್ನು ಗುರುತಿಸುವತ್ತ ಗಮನಹರಿಸಿದ್ದಾರೆ. ಪ್ರಜಾಪ್ರಭುತ್ವವನ್ನು ಕಾಪಾಡುವುದು ಮತ್ತು ದೇಶದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಖಚಿತಪಡಿಸಿಕೊಳ್ಳುವುದರ ಮೇಲೆ ಒತ್ತು ನೀಡಲಾಗುವುದು ಎಂದು ಅವರು ಹೇಳಿದ್ದಾರೆ. ಚಳವಳಿ ನಡೆಸುತ್ತಿರುವ ನಾಗರಿಕರ ಬೇಡಿಕೆಗಳನ್ನು ಪೂರೈಸಲು ನಡೆಯುತ್ತಿರುವ ಪ್ರಯತ್ನಗಳಲ್ಲಿ ಎಲ್ಲಾ ಪಕ್ಷಗಳು ವಿಶ್ವಾಸ ಹೊಂದಬೇಕು. ರಾಷ್ಟ್ರದಾದ್ಯಂತ ಶಾಂತಿ ಮತ್ತು ಸ್ಥಿರತೆಯನ್ನು ಕಾಪಾಡಿಕೊಳ್ಳಲು ಸಹಕರಿಸುವಂತೆ ರಾಮಚಂದ್ರ ಪೌಡೆಲ್ ಅಲ್ಲಿನ ನಾಗರಿಕರಿಗೆ ಮನವಿ ಮಾಡಿದ್ದಾರೆ.

*><><><*><><><*

ಅಬುಧಾಬಿಯ ಶೇಖ್ ಜ಼ಯೆದ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಏಷ್ಯಾಕಪ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ 'ಬಿ' ಗುಂಪಿನ ಪಂದ್ಯದಲ್ಲಿ ಬಾಂಗ್ಲಾದೇಶ ಮತ್ತು ಹಾಂಕಾಂಗ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ.

*><><><*><><><*

ಭಾರತವು ಮೊಟ್ಟಮೊದಲ ಬಾರಿಗೆ ನಡೆಯಲಿರುವ ಮಹಿಳಾ ಟಿ-೨೦ ಅಂಧರ ವಿಶ್ವಕಪ್‌ಗಾಗಿ ೧೬ ಸದಸ್ಯರ ತಂಡವನ್ನು ಪ್ರಕಟಿಸಿದೆ.  ನವೆಂಬರ್ ೧೧ ರಿಂದ ೨೫ ರವರೆಗೆ ನಡೆಯಲಿರುವ ಈ ಪಂದ್ಯಾವಳಿಯಲ್ಲಿ ೨೧ ಲೀಗ್ ಪಂದ್ಯಗಳು ಮತ್ತು ಎರಡು ಸೆಮಿಫೈನಲ್‌ಗಳು ಹಾಗೂ ನಂತರ ಫೈನಲ್ ಪಂದ್ಯ ನಡೆಯಲಿದೆ.  ಇದರಲ್ಲಿ ಆಸ್ಟ್ರೇಲಿಯಾ, ಇಂಗ್ಲೆಂಡ್, ಭಾರತ, ನೇಪಾಳ, ಪಾಕಿಸ್ತಾನ, ಶ್ರೀಲಂಕಾ ಮತ್ತು ಯುಎಸ್‌ಎ ತಂಡಗಳು ಭಾಗವಹಿಸಲಿವೆ. ಪಂದ್ಯಗಳು ನವದೆಹಲಿ ಮತ್ತು ಬೆಂಗಳೂರಿನಲ್ಲಿ ನಡೆಯಲಿವೆ.  ಈ ಮೊದಲು ಕಠ್ಮಂಡುವನ್ನು ಮೂರನೇ ಆತಿಥೇಯ ನಗರವೆಂದು ಗುರುತಿಸಲಾಗಿತ್ತು. ಪಾಕಿಸ್ತಾನವನ್ನು ಒಳಗೊಂಡ ಪಂದ್ಯಗಳನ್ನು ಅಲ್ಲಿ ನಿಗದಿಪಡಿಸಲಾಗಿತ್ತು. ಆದರೆ ನೇಪಾಳದಲ್ಲಿನ ಪ್ರಸ್ತುತ ಪರಿಸ್ಥಿತಿಯಿಂದಾಗಿ, ಪರ್ಯಾಯ ಸ್ಥಳವನ್ನು ಪರಿಗಣಿಸಲಾಗಿದೆ.

*><><><*><><><*